ಸದನದಲ್ಲಿ ಉತ್ತರಿಸುವ
ಪ್ರಶ್ನೆಗಳ ಪಟ್ಟಿ
ಒಟ್ಟು ಪ್ರಶ್ನೆಗಳು – ೧೫

**ಪಟ್ಟಿ–೨೯**

# ಕರ್ನಾಟಕ ವಿಧಾನ ಪರಿಷತ್ತು

**ನೂರ ಮೂವತ್ತಮೂರನೇ ಅಧಿವೇಶನ**

**(ಮುಂದುವರೆದ ಉಪವೇಶನಗಳು)**

**ಸೋಮವಾರ, ದಿನಾಂಕ: ೨೦ನೇ ನವೆಂಬರ್, ೨೦೧೭**

---

**ಸಮೂಹ – I**

೧. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು.
೨. ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.
೩. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.
೪. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು.
೫. ವೈದ್ಯಕೀಯ ಶಿಕ್ಷಣ ಸಚಿವರು.
೬. ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು.
೭. ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು.

---

## ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿನ ಜನರಲ್ ತಿಮ್ಮಯ್ಯ ಮ್ಯೂಸಿಯಂ ಲೋಕಾರ್ಪಣೆ ವಿಳಂಬವಾಗಿರುವ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೧ (೪೩೫೨) ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಮಡಿಕೇರಿಯಲ್ಲಿ ನಿರ್ಮಾಣವಾಗುತ್ತಿರುವ ಜನರಲ್ ತಿಮ್ಮಯ್ಯ ಮ್ಯೂಸಿಯಂ ಲೋಕಾರ್ಪಣೆಗೊಂಡಿದೆಯೇ ;

(ಆ) ಸದರಿ ಕಾಮಗಾರಿಗೆ ಆಡಳಿತಾತ್ಮಕ, ತಾಂತ್ರಿಕ ಮಂಜೂರಾತಿ ದೊರೆತ ಹಾಗೂ ಕಾಮಗಾರಿ ಪ್ರಾರಂಭವಾದ ದಿನಾಂಕಗಳು ಯಾವುವು ; (ದಾಖಲೆ ಒದಗಿಸುವುದು)

(ಇ) ಸದರಿ ಕಾಮಗಾರಿಗೆ ಮಂಜೂರಾದ, ಬಿಡುಗಡೆಯಾದ ಹಾಗೂ ಇದುವರೆಗೆ ಬಳಕೆಯಾದ ಅನುದಾನವೆಷ್ಟು ; ಮಂಜೂರಾತಿ ದೊರಕಿರುವ ಪೂರ್ಣ ಅನುದಾನ ಬಿಡುಗಡೆಯಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಈ) ಸದರಿ ಕಾಮಗಾರಿಯು ಇಷ್ಟು ವಿಳಂಬವಾಗಲು ಕಾರಣವೇನು ; ಹಾಗೂ ಯಾವ ದಿನಾಂಕದೊಳಗೆ ಕಾಮಗಾರಿ ಪೂರ್ಣಗೊಂಡು ಲೋಕಾರ್ಪಣೆಗೊಳ್ಳುವುದು ?

## ಸಮುದಾಯ ಭವನ, ಅಂಬೇಡ್ಕರ್ ಭವನ, ವಾಲ್ಮೀಕಿ ಭವನಗಳ ವಿವರ

**ಶ್ರೀ ಬಸವರಾಜ ಪಾಟೀಲ್ ಇಟಗಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೨ (೪೨೨೪) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩–೧೪, ೨೦೧೪–೧೫, ೨೦೧೫–೧೬ ಮತ್ತು ೨೦೧೬–೧೭ನೇ ಸಾಲಿನಲ್ಲಿ ರಾಯಚೂರು ಜಿಲ್ಲೆಯಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ಮಂಜೂರಾದ ಸಮುದಾಯ ಭವನ, ವಾಲ್ಮೀಕಿ ಭವನ, ಜಗಜೀವನರಾಮ ಭವನ, ಅಂಬೇಡ್ಕರ್ ಭವನಗಳು ಎಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಮಂಜೂರಾದ ಭವನಗಳ ಕಾಮಗಾರಿಗಳು ವಿಳಂಬ ಆಗುತ್ತಿದೆಯೇ ; ಹಾಗಿದ್ದಲ್ಲಿ, ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ಯಾವಾಗ ?

## ಹಿಂದುಳಿದ ವರ್ಗಗಳ ಜನರಿಗೆ ನೀಡಲಾದ ಮನೆಗಳ ಬಗ್ಗೆ

**ಶ್ರೀಮತಿ ಜಯಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೩ (೪೧೯೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ೨೦೧೩–೧೪ನೇ ಸಾಲಿನಿಂದ ೨೦೧೭–೧೮ನೇ ಸಾಲಿನವರೆಗೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ನೀಡಲಾದ ಮನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ವರೆಗೆ ಮಂಜೂರಾದ ಮನೆಗಳಲ್ಲಿ ಕಾಮಗಾರಿ ಪೂರ್ಣಗೊಂಡಿರುವ ಮನೆಗಳ ಸಂಖ್ಯೆ ಎಷ್ಟು ? (ವಿವರ ನೀಡುವುದು)

## HKRDBಗೆ ನೀಡಿರುವ ಅನುದಾನ

**ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) –**

೪೨೪ (೪೧೮೯) ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಯ ಮೂಲಕ ಹೈದ್ರಾಬಾದ್–ಕರ್ನಾಟಕ ಪ್ರದೇಶಗಳಾದ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರಗಿ ಹಾಗೂ ಬೀದರ್ ಜಿಲ್ಲೆಗಳಿಗೆ ಹಲವಾರು ಕೋಟಿ ರೂಪಾಯಿಗಳನ್ನು ನೀಡಲಾಗುತ್ತಿರುವುದು ನಿಜವೇ ;

(ಆ) ಯಾವ ಆಧಾರದ ಮೇಲೆ ಮಾರ್ಗ ನಕ್ಷೆಯನ್ನು ತಯಾರಿಸಲಾಗುತ್ತಿದೆ ; ಹೈದ್ರಾಬಾದ್–ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಯು ಯಾವುದಾದರೂ "ವಿಷನ್ ಡಾಕ್ಯೂಮೆಂಟ್" ಅನ್ನು ತಯಾರಿಸಿದೆಯೇ ಹಾಗೂ ಅಭಿವೃದ್ಧಿಯಲ್ಲಿನ ತೊಡಕುಗಳನ್ನು ಪಟ್ಟಿ ಮಾಡಲಾಗಿದೆಯೇ ; (ಮಾಹಿತಿಯನ್ನು ನೀಡುವುದು)

(ಇ) ಹೈದ್ರಾಬಾದ್–ಕರ್ನಾಟಕ ಪ್ರಾದೇಶಿಕ ಅಭಿವೃದ್ಧಿ ಮಂಡಳಿಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆ ಮಾಡಿರುವ ಅನುದಾನದ ಮೊತ್ತವೆಷ್ಟು ; ಸದರಿ ಅನುದಾನವನ್ನು ಯಾವ ಯಾವ ಅಭಿವೃದ್ಧಿಗಾಗಿ ಬಳಕೆ ಮಾಡಲಾಗಿದೆ ?

## ಸರ್ಕಾರಿ ವೈದ್ಯರಿಗೆ ನೀಡಿರುವ ಎಚ್ಚರಿಕೆ ಬಗ್ಗೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) –**

೪೨೫ (೪೩೦೫) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ವೈದ್ಯರುಗಳು ರೋಗಿಗಳನ್ನು ಪರಿಶೀಲನೆ ಮಾಡಿದ ನಂತರ ಔಷಧಿಯನ್ನು ಹೊರಗಡೆ ಖರೀದಿಸಲು ಚೀಟಿ ಬರೆದು ಕೊಟ್ಟರೆ, ಬರೆದು ಕೊಟ್ಟ ವೈದ್ಯರನ್ನು ಅಮಾನತ್ತು ಮಾಡಲಾಗುವುದೆಂದು ಸರ್ಕಾರದ ವತಿಯಿಂದ ಎಚ್ಚರಿಕೆ ನೀಡಿರುವುದು ನಿಜವೇ ; ನೀಡಿದ್ದಲ್ಲಿ, ಅದರ ಪ್ರತಿಯನ್ನು ನೀಡುವುದು;

(ಆ) ರೋಗಿಗಳಿಗೆ ಅಗತ್ಯವಿರುವ ಎಲ್ಲಾ ಔಷಧಿಗಳನ್ನೂ ಸರ್ಕಾರದಿಂದ ಸರಬರಾಜು ಮಾಡಲಾಗುತ್ತಿದೆಯೇ ; (ವಿವರ ನೀಡುವುದು)

(ಇ) ಈ ಎಚ್ಚರಿಕೆಯನ್ನು ಯಾವ ಹಂತದ ವೈದ್ಯರುಗಳಿಗೆ ನೀಡಲಾಗಿದೆ ; ತಜ್ಞ ವೈದ್ಯರುಗಳಿಗೂ ನೀಡಲಾಗಿದೆಯೇ ;

(ಈ) ಹಳ್ಳಿಗಳಲ್ಲಿ ಕೆಲಸ ಮಾಡುತ್ತಿರುವ ಪ್ರಾಥಮಿಕ ಚಿಕಿತ್ಸಾ ಕೇಂದ್ರದ ವೈದ್ಯರುಗಳಿಗೂ ಅನ್ವಯಿಸುತ್ತದೆಯೇ ;

(ಉ) ಆಸ್ಪತ್ರೆಗಳಲ್ಲಿ ಲಭ್ಯವಿರುವ ಹಾಗೂ ಲಭ್ಯವಿಲ್ಲದಿರುವ ಪ್ರಮುಖ ಆಂಟಿಬಯೋಟಿಕ್ಸ್ ಮಾತ್ರೆಗಳು ಮತ್ತು ಇಂಜಕ್ಷನ್‌ಗಳ ವಿವರ ನೀಡುವುದು?

## ನೂತನ ಪಿಂಚಣಿ ಯೋಜನೆ (ಎನ್.ಪಿ.ಎಸ್.)

**ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ (ಶಿಕ್ಷಕರ ಕ್ಷೇತ್ರ) –**

೪೨೬ (೪೧೪೮) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಸರ್ಕಾರಿ ಮಹಾವಿದ್ಯಾಲಯಗಳ ವೈದ್ಯರ/ಸಿಬ್ಬಂದಿಗಳಿಗೆ ನೂತನ ಪಿಂಚಣಿ ಯೋಜನೆ (ಎನ್‌ಪಿಎಸ್) ಅಳವಡಿಸಲು ಕೈಗೊಂಡಿರುವ ಕ್ರಮಗಳೇನು ; (ಇತ್ತೀಚಿನ ಮಾಹಿತಿ ಒದಗಿಸುವುದು)

(ಆ) ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿರುವ ಕೆಲವೊಂದು ಸಂಸ್ಥೆಗಳಿಗೆ ಎನ್‌ಪಿಎಸ್ ಯೋಜನೆಯನ್ನು ಅಳವಡಿಸಲಾಗಿದ್ದು, ಇದೇ ಇಲಾಖೆಯ ಇನ್ನುಳಿದ ಸರ್ಕಾರಿ ಸಂಸ್ಥೆಗಳಿಗೆ ಏಕೆ ಈ ಯೋಜನೆಯನ್ನು ಅಳವಡಿಸಿರುವುದಿಲ್ಲ;

(ಇ) ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ೨೦೧೫ರ ಬೆಳಗಾವಿಯ ಅಧಿವೇಶನದಲ್ಲಿ ಎಲ್ಲಾ ಸರ್ಕಾರಿ ಸಂಸ್ಥೆಗಳಿಗೆ ಎನ್‌ಪಿಎಸ್ ಅಳವಡಿಸಲು ಒಂದು ಸಮಿತಿಯನ್ನು ರಚಿಸಿ ಸಭೆಯನ್ನು ಮಾಡಿ ಎನ್‌ಪಿಎಸ್ ಅಳವಡಿಸಲು ಪರಿಶೀಲಿಸಲಾಗುವುದೆಂದು ಭರವಸೆ ನೀಡಿದ್ದಾಗ್ಯೂ ಸಹ ಇದುವರೆವಿಗೂ ಯಾವುದೇ ತೀರ್ಮಾನ ಕೈಗೊಳ್ಳದಿರಲು ಕಾರಣಗಳೇನು ;

(ಈ) ಎನ್‌ಪಿಎಸ್ ಅನ್ನು ಅಳವಡಿಸಲಾಗುವುದು ಯಾವಾಗ ;

(ಉ) ಸರ್ಕಾರಿ ವೈದ್ಯರು/ಸಿಬ್ಬಂದಿಗಳಿಗೆ ಜ್ಯೋತಿ ಸಂಜೀವಿನಿ ಅಳವಡಿಸಿಲ್ಲದಿದ್ದರೂ ವೈದ್ಯರು, ಸಿಬ್ಬಂದಿಗಳು ರೋಗಗಿಗಳಿಗೆ ಆರೋಗ್ಯ ಸೇವೆ ಹಾಗೂ ವಿದ್ಯಾರ್ಥಿಗಳಿಗೆ ಶಿಕ್ಷಣ ನೀಡುತ್ತಿದ್ದು, ಈ ಯೋಜನೆಯಿಂದ ವಂಚಿತರಾಗಿರುವುದು ನಿಜವೇ ; ಈ ಜ್ಯೋತಿ ಸಂಜೀವಿನಿ ಯೋಜನೆಯನ್ನು ಅಳವಡಿಸಲಾಗುವುದು ಯಾವಾಗ ?

## ಡಾ: ಬಿ.ಆರ್. ಅಂಬೇಡ್ಕರ್ ಭವನಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೭ (೪೩೪೫) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಚಿಕ್ಕಮಗಳೂರು ಜಿಲ್ಲೆಗೆ ಈಗಾಗಲೇ ಮಂಜೂರಾಗಿರುವ ಡಾ: ಬಿ.ಆರ್. ಅಂಬೇಡ್ಕರ್ ಭವನಗಳು ಎಷ್ಟು ; (ತಾಲ್ಲೂಕು ಮತ್ತು ಹೋಬಳಿವಾರು ಮಾಹಿತಿ ನೀಡುವುದು)

(ಆ) ಮಂಜೂರಾಗಿರುವ ಭವನ ನಿರ್ಮಾಣ ಮಾಡಲು ಸರ್ಕಾರದಿಂದ ಜಮೀನನ್ನು ಮಂಜೂರು ಮಾಡಲಾಗಿದೆಯೇ ;

(ಇ) ಜಮೀನು ಲಭ್ಯವಾಗದೆ ಇರುವ ಡಾ: ಬಿ.ಆರ್. ಅಂಬೇಡ್ಕರ್ ಭವನಗಳು ಎಷ್ಟು ; ಈ ಭವನಗಳಿಗೆ ಖಾಸಗಿ ಜಮೀನು ಖರೀದಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ? (ತಾಲ್ಲೂಕು ಮತ್ತು ಹೊಬಳಿವಾರು ಮಾಹಿತಿ ನೀಡುವುದು)

## ಕೆ.ಎಸ್.ಟಿ.ಡಿ.ಸಿ. ಟ್ಯಾಕ್ಸಿ ಸೇವೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) –**

೪೨೮ (೪೩೪೮) ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಹಾಗೂ ಪ್ರವಾಸೋದ್ಯಮ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ರಾಜ್ಯ ಪ್ರವಾಸೋದ್ಯಮ ನಿಗಮ (ಕೆ.ಎಸ್.ಟಿ.ಡಿ.ಸಿ.) ದಿಂದ ಬೆಂಗಳೂರು ಅಂತರರಾಷ್ಟ್ರೀಯ ವಿಮಾನ ನಿಲ್ದಾಣ (ಬಿ.ಐ.ಎ.ಎಲ್.)ದಲ್ಲಿ ಪೋಸ್ಟ್‌ಪೇಡ್ ಟ್ಯಾಕ್ಸಿ ಸೇವೆಯನ್ನು ಯಾವಾಗ ಪ್ರಾರಂಭಿಸಲಾಯಿತು ;

(ಆ) ಪೋಸ್ಟ್‌ಪೇಯ್ಡ್ ಟ್ಯಾಕ್ಸಿ ಸೇವೆಯ ಪಾರ್ಕಿಂಗ್ ಶುಲ್ಕ ಮತ್ತು ನಿರ್ವಹಣೆಯಲ್ಲಿ ಅಕ್ರಮಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದರೆ, ತಪ್ಪಿತಸ್ಥ ಅಧಿಕಾರಿಗಳ ವಿರುದ್ಧ ಕೈಗೊಂಡ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಈ) ಟ್ಯಾಕ್ಸಿ ಸೇವೆ ಉತ್ತಮಡಿಸುವ ಸಂಬಂಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರವಾದ ಮಾಹಿತಿ ನೀಡುವುದು)

(ಉ) ಹಾಲಿ ಈಗ ಎಷ್ಟು ಹೊಸ ಟ್ಯಾಕ್ಸಿ ಸಂಯೋಜನೆಗೆ ಯಾರಿಗೆ ಅನುಮತಿ ನೀಡಿದ್ದೀರಿ ; ಇದಕ್ಕೆ ಅನುಸರಿಸುತ್ತಿರುವ ಮಾನದಂಡಗಳೇನು ? (ವಿವರವಾದ ಮಾಹಿತಿ ನೀಡುವುದು)

## ಪ್ರಾಂಶುಪಾಲರ ಹುದ್ದೆಗಳ ನೇಮಕಾತಿ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ) –**

೪೨೯ (೪೩೬೭) ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಶಾಲೆಗಳಲ್ಲಿರುವ ಪ್ರಾಂಶುಪಾಲರ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ;

(ಆ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇರ ನೇಮಕಾತಿ ನಿಯಮಾನುಸಾರ ವಸತಿ ಶಾಲೆಗಳ ಪ್ರಾಂಶುಪಾಲರ ಹುದ್ದೆಗಳನ್ನು ಬಡ್ತಿ/ ನೇರ ನೇಮಕಾತಿ ಮೀಸಲಾತಿ ಅನುಪಾತದಂತೆ ಖಾಲಿ ಹುದ್ದೆಗಳನ್ನು ವರ್ಗೀಕರಿಸಲಾಗಿದೆಯೇ ;

(ಇ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವೃಂದ ಮತ್ತು ನೇರ ನೇಮಕಾತಿಯ ನಿಯಮಾನುಸಾರ ಬಡ್ತಿಗಾಗಿ (ಪಿ.ಆರ್) ಮತ್ತು ನೇರ ನೇಮಕಾತಿ (ಡಿ.ಆರ್.) ಮೀಸಲಿರುವ ಪ್ರಾಂಶುಪಾಲರ ಹುದ್ದೆಗಳ ಸಂಖ್ಯೆ ಎಷ್ಟು ;

(ಈ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಗದ ವೃಂದ ಮತ್ತು ನೇರ ನೇಮಕಾತಿ ನಿಯಮಾನುಸಾರ ವಸತಿ ಶಾಲೆಗಳ ಪ್ರಾಂಶುಪಾಲರ ಹುದ್ದೆಗಳನ್ನು ಬಡ್ತಿ/ ನೇರ ನೇಮಕಾತಿ ಮೀಸಲಾತಿಯ ಅನುಪಾತದಂತೆ ವರ್ಗೀಕರಿಸಲಾದ ಖಾಲಿ ಹುದ್ದೆಗಳ ಸಹ ಶಿಕ್ಷಕರುಗಳಿಗೆ ಬಡ್ತಿ ನೀಡಲಾಗಿದೆಯೇ ;

(ಉ) ಬಡ್ತಿ/ನೇರ ನೇಮಕಾತಿ ಅನುಪಾತದ ಮೀಸಲಾತಿಯನ್ನು ಅನುಸರಿಸದೇ ವೃಂದ ಮತ್ತು ನೇಮಕಾತಿ ನಿಯಮಗಳನ್ನು ಉಲ್ಲಂಘಿಸಿ ವಸತಿ ಶಾಲೆಗಳ ೩೧೦ ಪ್ರಾಂಶುಪಾಲರ ನೇಮಕಾತಿಗೆ ಕ.ವ.ಶಿ.ಸ. ಸಂಘವು ಕ್ರಮವಹಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವಸತಿ ಶಾಲೆಗಳ ಪ್ರಾಂಶುಪಾಲರ ಬಡ್ತಿ/ನೇರ ನೇಮಕಾತಿಯ ಅನುಪಾತದ ಮೀಸಲಾತಿಯನ್ನು ಸಾರ್ವಜನಿಕ

ಶಿಕ್ಷಣ ಇಲಾಖೆಯ ಮಾದರಿಯಲ್ಲಿ ೭೫:೨೫ ರಂತೆ ಮಾಡದಿರಲು ಕಾರಣವೇನು; ಖಾಲಿ ಇರುವ ಪ್ರಾಂಶುಪಾಲರ ಹುದ್ದೆಗಳಿಗೆ ಸಹ ಶಿಕ್ಷಕರುಗಳಿಗೆ ಬಡ್ತಿ ನೀಡದಿರಲು ಕಾರಣಗಳೇನು ?

## ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನದ ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ) –**

೪೩೦ (೪೩೨೯) ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಹೈದ್ರಾಬಾದ್–ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಗೆ ೨೦೧೩–೧೪ನೇ ಸಾಲಿನಿಂದ ಈವರೆವಿಗೂ ಸರ್ಕಾರದಿಂದ ಘೋಷಣೆ ಮಾಡಿದ ಅನುದಾನ ಎಷ್ಟು ; ಬಿಡುಗಡೆಯಾದ ಅನುದಾನ ಎಷ್ಟು ; ೩೦ ಅಕ್ಟೋಬರ್‌ವರೆಗೆ ವಾಸ್ತವಿಕವಾಗಿ ಖರ್ಚಾದ ಮೊತ್ತ ಎಷ್ಟು ; (ವರ್ಷವಾರು, ತಾಲ್ಲೂಕುವಾರು, ಮೊತ್ತವಾರು ಪ್ರತ್ಯೇಕ ಮಾಹಿತಿ ನೀಡುವುದು)

(ಆ) ಸದರಿ ಮಂಡಳಿಯ ಅನುದಾನದಲ್ಲಿ ೨೦೧೩–೧೪ನೇ ಸಾಲಿನಿಂದ ಇಲ್ಲಿಯವರೆಗೆ ಮುಖ್ಯಮಂತ್ರಿ ವಿವೇಚನಾ ನಿಧಿಯ ಹಾಗೂ ಅಧ್ಯಕ್ಷರ ವಿವೇಚನಾ ನಿಧಿಯ ಮೊತ್ತ ಎಷ್ಟು ; (ವರ್ಷವಾರು ಪ್ರತ್ಯೇಕ ಸವಿವರ ಮಾಹಿತಿ ನೀಡುವುದು)

(ಇ) ಸದರಿ ಮಂಡಳಿ ವತಿಯಿಂದ ಶಿಕ್ಷಣಕ್ಕೆ ಪ್ರೋತ್ಸಾಹ ಕೊಡುವ ನಿಟ್ಟಿನಲ್ಲಿ ಖಾಸಗಿ ಶಿಕ್ಷಣ ಸಂಸ್ಥೆಗಳ ಶಾಲಾ–ಕಾಲೇಜುಗಳಿಗೆ ಮೂಲಸೌಕರ್ಯ ಹಾಗೂ ಮಕ್ಕಳಿಗೆ ಸಮವಸ್ತ್ರ, ಷೂ, ಸಾಕ್ಸ್, ಬಿಸಿಯೂಟ ಹಾಗೂ ಇತರೆ ಸೌಲಭ್ಯ ಕೊಡಲು ಮುಂದಾಗುವುದೇ ; ಸರ್ಕಾರದ ಮುಂದಿನ ಕ್ರಮಗಳೇನು ?

## ವೈದ್ಯಕೀಯ ಸ್ನಾತಕೋತ್ತರ ಸೀಟುಗಳ ಬಗ್ಗೆ

**ಶ್ರೀ ರಿಜ್ವಾನ್ ಅರ್ಷದ್ (ವಿಧಾನಸಭೆಯಿಂದ ಚುನಾಯಿತರಾದವರು) –**

೪೩೧ (೪೧೭೮) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಕರ್ನಾಟಕದಲ್ಲಿ ಒಟ್ಟು ಎಷ್ಟು ಸರ್ಕಾರಿ/ಅರೆ ಸರ್ಕಾರಿ/ಖಾಸಗಿ ಕಾಲೇಜುಗಳಲ್ಲಿ ಲಭ್ಯವಿರುವ ವೈದ್ಯಕೀಯ ಸ್ನಾತಕೋತ್ತರ ಸೀಟುಗಳೆಷ್ಟು ; (ಕಾಲೇಜುವಾರು ವಿವರ ನೀಡುವುದು)

(ಆ) ಇದರಲ್ಲಿ ಸರ್ಕಾರದ ಕಾಲೇಜುಗಳನ್ನು ಹೊರತುಪಡಿಸಿ, ಉಳಿದ ಕಾಲೇಜುಗಳಲ್ಲಿನ ಸೀಟುಗಳಲ್ಲಿ ಸರ್ಕಾರದ ಪಾಲು ಎಷ್ಟು ; ಕ್ಲಿನಿಕಲ್ ಮತ್ತು ನಾನ್ ಕ್ಲಿನಿಕಲ್ ಸೀಟುಗಳೆಷ್ಟು ; (ಕಾಲೇಜುವಾರು ವಿವರ ನೀಡುವುದು)

(ಇ) ಹೊಸದಾಗಿ ಕಾರ್ಯಭಾರ ಮಾಡುತ್ತಿರುವ ಹಾಸನ, ಬೀದರ್, ಮಂಡ್ಯ, ರಾಯಚೂರು, ಬೆಳಗಾವಿ, ಶಿವಮೊಗ್ಗ ಮತ್ತು ಬಳ್ಳಾರಿ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಕ್ಲಿನಿಕಲ್ ವಿಭಾಗದ ಎಂ.ಎಸ್. ಮತ್ತು ಎಂ.ಡಿ. ಕೋರ್ಸ್‌ಗಳಿಗೆ ಭಾರತೀಯ ವೈದ್ಯ ಮಂಡಳಿ ಮಾನ್ಯತೆ ನೀಡಿದೆಯೇ ; (ಪೂರ್ಣ ವಿವರ ನೀಡುವುದು)

(ಈ) ಈ ಎಲ್ಲಾ ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಪಿಪಿಪಿ ಮಾದರಿಯಲ್ಲಿ ಎಂಆರ್‌ಐ ಕೇಂದ್ರಗಳನ್ನು ಆರಂಭಿಸಲು ಅವಕಾಶವಿದ್ದು, ಈವರೆಗೆ ಯಾವ ಯಾವ ಕಾಲೇಜುಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ; ಇಲ್ಲದಿದ್ದಲ್ಲಿ, ಸುಮಾರು ೪೦೦ ಸ್ನಾತಕೋತ್ತರ ಸೀಟುಗಳು ಕೈತಪ್ಪುವ ಸಾಧ್ಯತೆಯಿದ್ದು, ಉಳಿಸಿಕೊಳ್ಳಲು ಸರ್ಕಾರದ ಸ್ಪಷ್ಟ ನಿರ್ಧಾರವೇನು ?

## ಪ್ರಾದೇಶಿಕ ಅಸಮತೋಲನ ನಿವಾರಣೆ ಬಗ್ಗೆ

**ಶ್ರೀ ಬಿ.ಜೆ. ಪುಟ್ಟಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) –**

೪೩.೨ (೪೨೨೨) ಯೋಜನೆ ಮತ್ತು ಸಾಂಖ್ಯಿಕ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ಪ್ರಾದೇಶಿಕ ಅಸಮತೋಲನ ನಿವಾರಣೆಗೆ ವಿವಿಧ ಕಾರ್ಯಕ್ರಮಗಳನ್ನು ರೂಪಿಸಿರುವುದು ನಿಜವೇ ;

(ಆ) ಹಾಗಿದ್ದಲ್ಲಿ, ಅಂತಹ ಕಾರ್ಯಕ್ರಮಗಳು ಯಾವುವು ಹಾಗೂ ಮೀಸಲಿಟ್ಟಿರುವ ಹಣ ಎಷ್ಟು ಮತ್ತು ಖರ್ಚಾಗಿರುವ ಹಣ ಎಷ್ಟು ; (ವಿವರ ನೀಡುವುದು)

(ಇ) ವಿಶೇಷ ಅಭಿವೃದ್ಧಿ ಯೋಜನೆಯ ಕಾರ್ಯಕ್ರಮಗಳು ಯಾವುವು ಮತ್ತು ಮೀಸಲಿಟ್ಟಿರುವ ಹಣ ಮತ್ತು ಖರ್ಚಾಗಿರುವ ಹಣ ಎಷ್ಟು ? (ವಿವರ ನೀಡುವುದು)

## ಉನ್ನತೀಕರಿಸಿರುವ ಆಸ್ಪತ್ರೆಗಳ ಬಗ್ಗೆ

**ಶ್ರೀ ಎನ್.ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು) –**

೪೩೩ (೪೩೪೮) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಯಚೂರು ಜಿಲ್ಲೆಯಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಂದ ಉನ್ನತೀಕರಣ ಆಗಿರುವ (Upgradation) ಆಸ್ಪತ್ರೆಗಳ ಸಂಖ್ಯೆ ಎಷ್ಟು ; ಇದಕ್ಕೆ ಮಂಜೂರಾದ ಅನುದಾನ ಎಷ್ಟು ;

(ಆ) ರಾಯಚೂರು ಜಿಲ್ಲೆಯಲ್ಲಿರುವ ತಾಲ್ಲೂಕು ಆಸ್ಪತ್ರೆಗಳಲ್ಲಿ ತುರ್ತು ನಿಗಾ ಘಟಕಗಳನ್ನು (Emergency Ward) ಪ್ರಾರಂಭ ಮಾಡಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು?

## ರಾಜೀವ್‌ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದ ಬಗ್ಗೆ

**ಶ್ರೀ ಸಯದ್ ಮುಧೀರ್ ಆಗಾ (ವಿಧಾನಸಭೆಯಿಂದ ಚುನಾಯಿತರಾದವರು) –**

೪೩೪ (೪೧೯೭) ವೈದ್ಯಕೀಯ ಶಿಕ್ಷಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಮನಗರದಲ್ಲಿ ಪ್ರಾರಂಭಿಸಲಾಗಿರುವ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಇಂಜಿನಿಯರಿಂಗ್ ವಿಭಾಗದ ಕಛೇರಿ ಹೊರತುಪಡಿಸಿ ಉಳಿದ ಯಾವುದೇ ಕಛೇರಿಗಳನ್ನು ಸ್ಥಳಾಂತರಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಆಡಳಿತ ಕಛೇರಿಗಳನ್ನು ಸ್ಥಳಾಂತರಿಸದೇ ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಕೆಲಸ ಕಾರ್ಯಗಳು ಸುಗಮವಾಗಿ ನಡೆಯಲು ಸಾಧ್ಯವೇ;

(ಇ) ಹಾಗಿದ್ದಲ್ಲಿ, ರಾಜೀವಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಸಂಬಂಧಿಸಿದ ಆಡಳಿತಾತ್ಮಕ ಹಾಗೂ ಇತರೆ ಎಲ್ಲಾ ಕಛೇರಿಗಳನ್ನು ರಾಮನಗರಕ್ಕೆ ಯಾವಾಗ ಸ್ಥಳಾಂತರಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಭಾರತೀಯ ವೈದ್ಯ ಪದ್ಧತಿಯ ವೈದ್ಯರನ್ನು ನೇಮಿಸುವ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) –**

೪೩೫ (೪೩೨೧) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ –

(ಅ) ರಾಜ್ಯ ಸರ್ಕಾರದ ಆಯುಷ್ ಇಲಾಖೆಯಿಂದ ಭಾರತೀಯ ವೈದ್ಯ ಪದ್ಧತಿಯ ವೈದ್ಯರನ್ನು ನೇಮಿಸಿಕೊಳ್ಳುವ ಪದ್ಧತಿ ಚಾಲ್ತಿಯಲ್ಲಿದೆಯೇ , ಇದ್ದಲ್ಲಿ, ಕಳೆದ ೫ ವರ್ಷಗಳಿಂದ ಎಷ್ಟು ವೈದ್ಯರನ್ನು ನೇಮಿಸಿದೆ ; (ವಿವರಗಳನ್ನು ನೀಡುವುದು)

(ಆ) ರಾಜ್ಯ ಸರ್ಕಾರದ ಗ್ರಾಮೀಣ ಆರೋಗ್ಯ ಸೇವೆಗೆ ಆಯುಷ್ ವೈದ್ಯರನ್ನು ನೇಮಿಸಿಕೊಳ್ಳುವ ಪ್ರಸ್ತಾವನೆ ಇದೆಯೇ ? (ಇದ್ದಲ್ಲಿ ಮಾಹಿತಿ ನೀಡುವುದು)

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು.

ಸುವರ್ಣ ಸೌಧ, ಬೆಳಗಾವಿ, ಪಿ7, ಕಾ.ಸೂ. , ಪ್ರತಿಗಳು 1500